## ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜಿನಲ್ಲಿ

## ಹಮ್ಮಿಕೊಳ್ಳಲಾಗಿದ್ದ ಸಾಂಸ್ಕೃತಿಕ, ಕ್ರೀಡಾ, ಎನ್‌ಎಸ್‌ಎಸ್, ಎನ್‌ಸಿಸಿ

## ಹಾಗೂ ಇತರೆ ಚಟುವಟಿಕೆಗಳ ಉದ್ಘಾಟನಾ ಸಮಾರಂಭ

ಯಾವುದೇ ವ್ಯಕ್ತಿಯ ಭವಿಷ್ಯವನ್ನು ಮತ್ತೊಬ್ಬರು ರೂಪಿಸಲು ಸಾಧ್ಯವಿಲ್ಲ, ನಿಮ್ಮ ಏಳ್ಗೆಯ ಕೀಲಿ ಕೈ ನಿಮ್ಮಲ್ಲಿಯೇ ಇದೆ. ನಿಮ್ಮ ಭವಿಷ್ಯತ್ತಿನ ರೂವಾರಿಗಳು ನೀವೇ ಎಂದು ರಂಗಿತರಂಗ ಚಲನ ಚಿತ್ರದ ಖ್ಯಾತ ನಟ ನಿರೂಪ್ ಭಂಡಾರಿ ವಿದ್ಯಾರ್ಥಿನಿಯರಿಗೆ ತಿಳಿಸಿದರು.

ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜಿನಲ್ಲಿ ಹಮ್ಮಿಕೊಳ್ಳಲಾಗಿದ್ದ ಸಾಂಸ್ಕೃತಿಕ, ಕ್ರೀಡಾ, ಎನ್‌ಎಸ್‌ಎಸ್, ಎನ್‌ಸಿಸಿ ಹಾಗೂ ಇತರೆ ಚಟುವಟಿಕೆಗಳ ಉದ್ಘಾಟನಾ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಅವರು ಮಾತನಾಡಿದರು.

ಈ ಕಾಲೇಜಿನಲ್ಲಿ ಮೂರು ಸಾವಿರ ವಿದ್ಯಾರ್ಥಿನಿಯರಿದ್ದು, ಮೂರು ಸಾವಿರ ಪ್ರತಿಭೆಗಳಿದ್ದೀರಿ. ಮೊದಲು ತಂದೆತಾಯಿಗೆ ಒಳ್ಳೆಯ ಮಕ್ಕಳಾಗಿ, ಕಾಲೇಜಿಗೆ ಒಳ್ಳೆಯ ವಿದ್ಯಾರ್ಥಿಗಳಾಗಬೇಕು. ಪದವಿಯ ನಂತರ ನಿಮ್ಮ ಪ್ರತಿಭೆಯಾನುಸಾರ ನಿಮ್ಮ ನಿಮ್ಮ ಕ್ಷೇತ್ರಗಳಲ್ಲಿ ಸಾಧನೆ ಮಾಡುವಂತೆ ತಿಳಿ ಹೇಳಿದರು.

ನಿಜ ಜೀವನಕ್ಕೂ ಚಲನ ಚಿತ್ರಕ್ಕೂ ತುಂಬಾ ವ್ಯತ್ಯಾಸವಿದೆ. ನಿಜ ಜೀವನದಲ್ಲಿ ನಿರ್ವಹಿಸಲಾಗದ ಪಾತ್ರಗಳನ್ನು ಸಿನಿಮಾದಲ್ಲಿ ಮಾಡಲು ಅವಕಾಶವಿದೆ. ಜೀವನದಲ್ಲಿ ಪತ್ರಿಯೊಬ್ಬರೂ ಒಂದು ಬದ್ಧತೆ ಬೆಳೆಸಿಕೊಳ್ಳಬೇಕು. ಶಿಸ್ತು ಮತ್ತು ಪರಿಶ್ರಮದಿಂದ ಏನನ್ನಾದರೂ ಸಾಧಿಸಲು ಸಾಧ್ಯವಿದೆ ಎಂದು ಹೇಳಿದರು.

ಚಾಮರಾಜ ವಿಧಾನಸಭಾ ಕ್ಷೇತ್ರದ ಶಾಸಕರು ಹಾಗೂ ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷರಾದ ವಾಸು ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ಪಡುವಾರಹಳ್ಳಿ ಬಳಿ ನಿರ್ಮಿಸಲಾಗುತ್ತಿರುವ ವಾಣಿಜ್ಯ ಕಾಲೇಜಿನ ಕಾಮಗಾರಿ ಕೊನೆಯ ಹಂತದಲ್ಲಿದೆ. ಮುಂದಿನ ಶೈಕ್ಷಣಿಕ ವರ್ಷದಿಂದ ಹೊಸ ಕಾಲೇಜು ಕಾರ್ಯಾರಂಭ ಮಾಡಲಿದೆ ಎಂದರು.

ಮಹಾರಾಜರ ಕಾಲದ ಈ ಕಾಲೇಜು ಇಂದು ಬೃಹತ್ತಾಗಿ ಬೆಳೆದಿದೆ. ಸರ್ಕಾರ ಹೆಣ್ಣು ಮಕ್ಕಳ ವ್ಯಾಸಂಗಕ್ಕೆ ಸಾಕಷ್ಟು ಸೌಲಭ್ಯ ಕಲ್ಪಿಸಿದೆ. ಕೇವಲ ಕಟ್ಟಡ, ಸೌಲಭ್ಯ ನೀಡಿದರೆ ಸಾಲದು, ಅದು ಸದ್ಬಳಕೆಯಾಗಬೇಕಾದರೆ ಗುಣಮಟ್ಟದ ಶಿಕ್ಷಣ ಪ್ರತಿಯೊಬ್ಬ ವಿದ್ಯಾರ್ಥಿನಿಗೂ ದಕ್ಕಬೇಕು ಎಂದು ಅಭಿಪ್ರಾಯಪಟ್ಟರು.

ನಿವೃತ್ತ ಪ್ರಾಂಶುಪಾಲ ಪ್ರೊ.ಹೆಚ್.ಬಿ.ಮಲ್ಲಿಕಾರ್ಜುನಸ್ವಾಮಿ ಮಾತನಾಡಿ, ಪಠ್ಯೇತರ ಚಟುವಟಿಕೆಗಳು ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕೆ ಸಹಕಾರಿಯಾಗಲಿವೆ. ಸಾಂಸ್ಕೃತಿಕ, ಎನ್‌ಎಸ್‌ಎಸ್, ಎನ್‌ಸಿಸಿ, ಸ್ಕೌಟ್ಸ್‌ಗೈಡ್ಸ್, ಕ್ರೀಡೆ ಮುಂತಾದ ಘಟಕಗಳು ವಿದ್ಯಾರ್ಥಿಗಳಲ್ಲಿ ಸೇವೆ ಹಾಗೂ ಸ್ಪರ್ಧಾತ್ಮಕ ಮನೋಭಾವ ಬೆಳೆಸಲು ನೆರವಾಗಲಿವೆ. ಪ್ರತಿಯೊಬ್ಬರೂ ಇದರ ಪ್ರಯೋಜನ ಪಡೆದುಕೊಳ್ಳಬೇಕು ಎಂದರು.

ಕಾಲೇಜಿನ ಪ್ರಾಚಾರ್ಯ ಡಾ.ಅಣ್ಣೇಗೌಡ ಅಧ್ಯಕ್ಷತೆವಹಿಸಿ ಮಾತನಾಡಿದರು. ಎಲ್ಲ ಸಮಿತಿಗಳ ಮುಖ್ಯ ಸಂಯೋಜಕ ಪ್ರೊ.ಎಂ.ಶಿವಣ್ಣ, ಅಧ್ಯಾಪಕ ಕಾರ್ಯದರ್ಶಿ ಪ್ರೊ.ಸೋಮಣ್ಣ, ಸಾಂಸ್ಕೃತಿಕ ಸಮಿತಿ ಕಾರ್ಯದರ್ಶಿ ಪ್ರೊ.ಪಿ.ಶಿವಣ್ಣ, ಮಹಾನಗರ ಪಾಲಿಕೆಯ ಮೇಯರ್ ಬಿ.ಎಲ್.ಭೈರಪ್ಪ, ಸದಸ್ಯ

ಮಂಜುನಾಥ್, ಕಾರ್ಯಕಾರಿ ಸಮಿತಿ ಅಧ್ಯಕ್ಷ ಶಂಕರ್, ವಿದ್ಯಾರ್ಥಿ ಸಂಘದ ಅಧ್ಯಕ್ಷೆ ಕು.ಕೆ.ಸೌಮ್ಯ, ಕಾರ್ಯದರ್ಶಿ ಮೇಘನಾ ಸಿ.ಡಿ. ಹಾಜರಿದ್ದರು. ಇದೇ ಸಂದರ್ಭದಲ್ಲಿ ಮಹಾನಗರ ಪಾಲಿಕೆಯಿಂದ ಕಾಲೇಜಿನಲ್ಲಿ ನಿರ್ಮಿಸಿರುವ ಎರಡು ನೂತನ ಶೌಚಾಲಯಗಳಿಗೆ ನಟ ನಿರೂಪ್ ಭಂಡಾರಿ ಟೇಪ್ ಕತ್ತರಿಸುವ ಮೂಲಕ ಚಾಲನೆ ನೀಡಿದರು.